## ಡಿನೋಟಿಫೈ: ಬಿಎಸ್‌ವೈ ವಿರುದ್ಧದ ಕೇಸ್ ರದ್ದತಿಗೆ ಹೈಕೋರ್ಟ್ ನಕಾರ

6/1/21

ಬೆಂಗಳೂರು: ನಗರದ ಗಂಗೇನಹಳ್ಳಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ವಶಪಡಿಸಿಕೊಂಡಿದ್ದ 1 ಎಕರೆ 11 ಗುಂಟೆ ಜಮೀನನ್ನು ಅಕ್ರಮವಾಗಿ ಡಿ-ನೋಟಿಫಿಕೇಷನ್ ಮಾಡಿದ ಆರೋಪದ ಸಂಬಂಧ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಲೋಕಾಯುಕ್ತ ಪೊಲೀಸರು ದಾಖಲಿಸಿರುವ ಎಫ್‌ಐಆರ್ ರದ್ದುಪಡಿಸಲು ನಿರಾಕರಿಸಿರುವ ಹೈಕೋರ್ಟ್, ತನಿಖೆ ಮುಂದುವರೆಸುವಂತೆ ಲೋಕಾಯುಕ್ತ ಪೊಲೀಸರಿಗೆ ಸೂಚಿಸಿದೆ. ಎಫ್‌ಐಆರ್ ರದ್ದು ಕೋರಿ ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಿ ನ್ಯಾ। ಜಾನ್ ಮೈಕೆಲ್ ಕುನ್ಹಾ ಈ ಆದೇಶ ಮಾಡಿದ್ದಾರೆ. ಇದಲ್ಲದೆ, ಉದ್ಯಮಿ ಆಲಂ ಪಾಷಾ ಒಡೆತನದ ಕಂಪನಿಗೆ ದೇವನಹಳ್ಳಿಯಲ್ಲಿ ಸರ್ಕಾರದಿಂದ ಮಂಜೂರು ಮಾಡಿದ್ದ 26 ಎಕರೆ ಜಮೀನನ್ನು ಫೋರ್ಜರಿ ಮಾಡಿ ಹಿಂಪಡೆದು ಬೇರೆ ಕಂಪನಿಗೆ ಮಾರಿದ ಆರೋಪ ಕುರಿತು ಬಿಎಸ್‌ವೈ ವಿರುದ್ಧದ ಖಾಸಗಿ ದೂರು ರದ್ದುಪಡಿಸಿದ್ದ ಲೋಕಾಯುಕ್ತ ಕೋರ್ಟ್ ಆದೇಶ ಪ್ರಶ್ನಿಸಿದ ಅರ್ಜಿಯನ್ನು ಹೈಕೋರ್ಟ್ ವಿಚಾರಣೆಗೆ ಅಂಗೀಕರಿಸಿದೆ.